**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 394/2024** **CW**-2 **PW**-2

**ಸಾಕ್ಷಿಯನ್ನು ದಿಃ 03.06.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಸತೀಶ್ |
| ತಂದೆಯ ಹೆಸರುಃ | ಯೋಗನರಸಿಂಹೇಗೌಡ |
| ವಯಸ್ಸುಃ | 47 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸ ಸ್ಥಳಃ | ದೊಡ್ಡಗನ್ನಿ ಗ್ರಾಮ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಸ್ಥಳ ಮತ್ತು ಅಮಾನತ್ತು ಮಹಜರ್ ತೋರಿಸಲಾಗಿ, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು 3 ವರ್ಷದ ಹಿಂದೆ ಹೌಸಿಂಗ್ ಬೋರ್ಡ್ ಬಳಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿ ನಿಪಿ-5 ರ ಫೋಟೋದಲ್ಲಿ ತಾನು ಇರುವುದನ್ನು ಗುರುತಿಸಿದ್ದು, ಯಾವ ಕಾರಣಕ್ಕೆ ಫೋಟೋ ತೆಗೆದರು ಎಂದು ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 27.02.2024 ರಂದು ಬೆಳಗ್ಗೆ 10.15 ರಿಂದ 11.15 ರ ಸಮಯದಲ್ಲಿ ಪೋಲೀಸರು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ಸ್ಥಳವನ್ನು ತೋರಿಸಿದ್ದು ನಿಪಿ-

4 ರಂತೆ ಮಹಜರ್ ಕ್ರಮ ಜರುಗಿಸಿ ಸ್ಥಳದಲ್ಲಿದ್ದ ಮು ಮಾ–1 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರಗಳು ಗೊತ್ತಿದ್ದರು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಡಿ ಎಲ್ ಎಸ್ ಎ ವಕೀಲರಾದ ಶ್ರೀಮತಿ. ಎಸ್ ಕೆ ಎಸ್ ರವರಿಂದ ಃ**

ಆರೋಪಿ ಪರ ಡಿ ಎಲ್ ಎಸ್ ಎ ವಕೀಲರು ಪಾಟಿ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿದ್ದು, ಅನುಮತಿಸಲಾಯಿತು.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**